**<u>ಸಾಕ್ಷಿಗೆ ದಿನಾಂಕ 20-01-2024 ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು</u>**

**<u>ಮುಂದುವರೆದ ಮುಖ್ಯ ವಿಚಾರಣೆ ವಾದಿ ಪರ ಶ್ರೀ.ಜಿ.ಎಸ್.ವಕೀಲರಿಂದ</u>**

ನಾನು ದಿಃ 10-08-2015 ರ ಮೂಲ ಖರೀದಿ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.ಸಾಕ್ಷಿಯು ನಿಪಿ-1 ರಲ್ಲಿರುವ ಪ್ರತಿವಾದಿಯ ಹೆಬ್ಬಟ್ಟಿನ ಗುರುತನ್ನು ನೋಡಿ ಗುರುತಿಸಿರುತ್ತಾರೆ. ಅದೇ ರೀತಿ ಸಾಕ್ಷಿಯು ನಿಪಿ-1 ರಲ್ಲಿರುವ ಪ್ರತಿವಾದಿಯ ಮಗನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1 (ಬಿ) ಎಂದು ಗುರುತಿಸಲಾಯಿತು.

ಓಎಸ್ ನಂಃ 55/2018 ರ ವಾದ ಪತ್ರದ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಸದರಿ ಓಎಸ್ ನಂಃ 55/2018 ರ ಪ್ರತಿವಾದ ಪತ್ರದ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಓಎಸ್ ನಂಃ 55/2018 ರ ಪಿಡಬ್ಲೂಃ01 ರವರ ಮುಖ್ಯ ವಿಚಾರಣೆ ಮತ್ತು ಪಾಟೀ ಸವಾಲಿನ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ಓಎಸ್ ನಂಃ 55/2018 ರ ಡಿಡಬ್ಲೂಃ01 ರವರ ಮುಖ್ಯ ವಿಚಾರಣೆ ಮತ್ತು ಪಾಟೀ ಸವಾಲಿನ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ದಿಃ 08-02-2017 ರ ನೋಟಿಸಿನ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು ಸಮಯ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು, ಚಿತ್ತಾಪೂರ.